# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆಯಡಿ (PMKSY-WD & OI) 2016-17 ಮತ್ತು 2017-18ನೇ ಸಾಲಿನಲ್ಲಿ ಖರ್ಚಾಗದೇ ಖಜಾನೆಯಲ್ಲಿ ವ್ಯಪಗತವಾದ ಅನುದಾನವನ್ನು ಮರುಮೌಲ್ಯೀಕರಿಸಿ 2019-20ನೇ ಸಾಲಿಗೆ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: K-11013/18/2012-13-IWMP (Karnataka), ದಿನಾಂಕ: 30.07.2018.
3. ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಅಇ/ಲೆಕ್ಕ-5/PMKSY/Revalidation/2017-18 ಮತ್ತು ದಿನಾಂಕ: 07.08.2018, ಜಅಇ/ಲೆಕ್ಕ-5/PMKSY-WD&OI/Revalidation/2018-19, ದಿನಾಂಕ: 10.12.2018, 24.05.2019 & 29.06.2019.
4. ಸರ್ಕಾರದ ಆದೇಶ ಸಂಖ್ಯೆ: ಕೃಇ 15 ಕೃಉಇ 2019, ದಿನಾಂಕ: 05.08.2019.

**ಪ್ರಸ್ತಾವನೆ:**

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ (PMKSY) ಲೆಕ್ಕ ಶೀರ್ಷಿಕೆ-2402-00-102-0-30 ಅಡಿ ಒಟ್ಟು ರೂ.16600.00 ಲಕ್ಷ ಅನುದಾನ ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ (PMKSY) ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ (PMKSY) ಯಡಿಯ PMKSY-WD&OI ಕಾರ್ಯಕ್ರಮದಡಿ, ಆರ್ಥಿಕ ವರ್ಷದ ಅಂತ್ಯದಲ್ಲಿ ಉಳಿಕೆಯಾಗುವ ಅಂತಿಮ ಶಿಲ್ಕು ಮುಂದಿನ ಆರ್ಥಿಕ ವರ್ಷದಲ್ಲಿ ಬಿಡುಗಡೆಯಾಗುವ ಅನುದಾನದಲ್ಲೇ ಸೇರ್ಪಡೆಯಾಗಿ ಬಿಡುಗಡೆಯಾಗುವುದರಿಂದ ಪ್ರತ್ಯೇಕವಾಗಿ ಬಿಡುಗಡೆ ಮಾಡುವ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸಲಾಗಿದೆ.

ಮೇಲೆ ಓದಲಾದ (3)ರ ಜಲಾನಯನ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆಗಳಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ (PMKSY) ಯಡಿಯ PMKSY-WD&OI ಕಾರ್ಯಕ್ರಮದಡಿ 2016-17ನೇ ಸಾಲಿನಲ್ಲಿ ಉಳಿಕೆಯಾದ ರೂ. 131.53 ಲಕ್ಷಗಳು (ಕೇಂದ್ರದ ಪಾಲು ರೂ. 78.918 ಲಕ್ಷ + ರಾಜ್ಯದ ಪಾಲು ರೂ. 52.612 ಲಕ್ಷಗಳು) ಹಾಗೂ 2017-18ನೇ ಸಾಲಿನಲ್ಲಿ ಉಳಿಕೆಯಾದ ರೂ. 463.47 ಲಕ್ಷಗಳು (ಕೇಂದ್ರದ ಪಾಲು ರೂ. 278.082 + ರಾಜ್ಯದ ಪಾಲು ರೂ. 185.388 ಲಕ್ಷಗಳು) ಸೇರಿ ಒಟ್ಟು ರೂ. 595.00 ಲಕ್ಷಗಳನ್ನು 2019-20ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಂತೆ ಕಾಮಗಾರಿಗಳ ಅನುಷ್ಠಾನಕ್ಕಾಗಿ ಜಿಲ್ಲೆಗಳಿಗೆ ಬಿಡುಗಡೆ ಮಾಡಲು ಅನುದಾನವನ್ನು ಮರುಮೌಲ್ಯೀಕರಿಸಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ (PMKSY) ಯಡಿಯ PMKSY- OI-PDMC ಕಾರ್ಯಕ್ರಮದಡಿ 2018-19ನೇ ಸಾಲಿನಲ್ಲಿ ಬಿಡುಗಡೆಗೆ ಬಾಕಿ ಉಳಿದಿದ್ದ ಅನುದಾನ ರೂ. 3171.6667 ಲಕ್ಷಗಳನ್ನು ಮರುಮೌಲ್ಯೀಕರಿಸಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 86 ಕೃಉಇ 2018, ಬೆಂಗಳೂರು, ದಿನಾಂಕ: 28.08.2019**

ಕೇಂದ್ರ ಪುರಸ್ಕೃತ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ (PMKSY) ಯಡಿಯ PMKSY-WD&OI ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2016-17 ಮತ್ತು 2017-18ನೇ ಸಾಲಿನಲ್ಲಿ ಉಳಿಕೆಯಾಗಿದ್ದ ಕೇಂದ್ರ ಸರ್ಕಾರದ ಪಾಲಿನ ಅನುದಾನ ರೂ. 357.00 ಲಕ್ಷಗಳಿಗೆ ರಾಜ್ಯದ ಪಾಲಿನ ಶೇ.40ರಷ್ಟು ಅನುದಾನ ರೂ. 238.00 ಲಕ್ಷಗಳನ್ನು ಸೇರಿಸಿ ಒಟ್ಟಾರೆ **ರೂ. 595.00 ಲಕ್ಷಗಳನ್ನು** (ಐದು ನೂರ ತೊಂಭತ್ತೈದು ಲಕ್ಷ ರೂಪಾಯಿಗಳು ಮಾತ್ರ) 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2402-00-102-0-30 ಅಡಿ ಈ ಕೆಳಕಂಡಂತೆ ಬಿಡುಗಡೆ ಮಾಡುತ್ತಾ, ಘಟಕವಾರು ಮತ್ತು ವರ್ಗವಾರು ನಿಗಧಿತ ಹಂಚಿಕೆ ಮಾಡಿ 2019-20ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಘಟಕ | ಮರುಮೌಲ್ಯೀಕರಿಸಿದ ಅನುದಾನ | | |
|---|---|---|---|---|
| | | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
| 1 | 139 | 273.864 | 182.576 | 456.44 |
| 2 | 422 | 67.194 | 44.796 | 111.99 |
| 3 | 423 | 15.942 | 10.628 | 26.57 |
| ಒಟ್ಟು | | **357.00** | **238.00** | **595.00** |

ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 537 ವೆಚ್ಚ-4/2019, ದಿನಾಂಕ: 13.08.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnamma

**(ಬಿ.ಎಸ್. ನಾಗರತ್ನಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
28/08/19

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.